# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 318 (**ಕಂದಾಯ ಇಲಾಖೆಯಿಂದ ವರ್ಗಾಯಿಸಲ್ಪಟ್ಟಿದೆ.**) |
| ಸದಸ್ಯರ ಹೆಸರು | : | ಶ್ರೀ ಶರವಣ ಟಿ.ಎ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21-12-2022 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹೊಸ ಭಾರತ ನಿರ್ಮಾಣಕ್ಕೆ ಪೂರಕವಾಗಿ ನವ ಕರ್ನಾಟಕ ನಿರ್ಮಾಣದ ಘೋಷಣೆಯಲ್ಲಿ ಪರಿಸರ ಸ್ನೇಹಿ, ಉದ್ಯಮ ಸಶೀಲಾ ನವ ನಗರಗಳನ್ನು ಪ್ರತಿ ಕಂದಾಯ ವಲಯಗಳಲ್ಲಿ ಕಟ್ಟುವ ಕುರಿತು ಸರ್ಕಾರದ ಯೋಜನೆಗಳೇನು; (ವಿವರ ನೀಡುವುದು) | ನವ ನಗರಗಳ ನಿರ್ಮಾಣಕ್ಕೆ (Integrated township) ರಾಜ್ಯದ ನಾಲ್ಕು ಕಂದಾಯ ವಿಭಾಗಗಳಿಂದ ಗುರುತಿಸಿರುವ ಜಮೀನುಗಳಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ವಿಸ್ತೃತ ಯೋಜನಾ ವರದಿಯನ್ನು ತಯಾರಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಆ) | ಈವರೆಗೆ ಎಷ್ಟು ಕಂದಾಯ ವಿಭಾಗಗಳಲ್ಲಿ ಎಷ್ಟು ನವ ನಗರಗಳನ್ನು ನಿರ್ಮಿಸಲಾಗಿದೆ; | ಪ್ರಸ್ತುತ ಯಾವುದೇ ನವ ನಗರಗಳನ್ನು ನಿರ್ಮಿಸಲಾಗಿರುವುದಿಲ್ಲ. |
| ಇ) | ಸರ್ಕಾರದ ಈ ಮಹತ್ವಾಕಾಂಕ್ಷೆಯ ಯೋಜನೆ ಗುರಿ ಮುಟ್ಟಲು ಇರುವ ಅಡ್ಡಿ ಆತಂಕಗಳೇನು; ಇದನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಸರ್ಕಾರದ ಹಂತದಲ್ಲಿ ಯಾವುದೇ ಅಡ್ಡಿ ಆತಂಕಗಳಿರುವುದಿಲ್ಲ. ಈಗಾಗಲೇ ನವ ನಗರಗಳನ್ನು ನಿರ್ಮಿಸುವ ಪ್ರಕ್ರಿಯೆ ಪ್ರಾರಂಭವಾಗಿದ್ದು, ನಾಲ್ಕು ಕಂದಾಯ ವಿಭಾಗಗಳಲ್ಲಿ ಜಮೀನುಗಳನ್ನು ಗುರುತಿಸಲಾಗಿರುತ್ತದೆ ಹಾಗೂ ನವ ನಗರ ನಿರ್ಮಾಣ ಮಾಡಲು ವಿಸ್ತೃತ ಯೋಜನಾ ವರದಿಯನ್ನು ತಯಾರಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

ಸಂಖ್ಯೆ:ನಅಇ 207 ಸಿಎಸ್ಎಸ್ 2022

**(ಬಿ.ಎ.ಬಸವರಾಜ)**

ನಗರಾಭಿವೃದ್ಧಿ ಸಚಿವರು